ಸಂಯುಕ್ತ ಕರ್ನಾಟಕ

# ಯಶಸ್ವಿ ಶಸ್ತ್ರ ಚಿಕಿತ್ಸೆ

ಅವಾಸ್ಕುಲರ್ ನೆಕ್ರೋಸಿಸ್‌ನಿಂದ ಬಳಲಿ ಹಾಸಿಗೆ ಹಿಡಿದಿದ್ದ 35 ವರ್ಷದ ವ್ಯಕ್ತಿಗೆ ಇಲ್ಲಿನ ಅಪೋಲೊ ಸ್ಪೆಕ್ಟ್ರಾ ಆಸ್ಪತ್ರೆಯ ವೈದ್ಯರು ಶಸ್ತ್ರ ಚಿಕಿತ್ಸೆ ನಡೆಸಿ ವ್ಯಕ್ತಿಯನ್ನು ಗುಣಮುಖ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ರಿಗ್ರೋ ಬಯೋ ಸೈನ್ಸಸ್ ಸಹಯೋಗದೊಂದಿಗೆ ಶಸ್ತ್ರ ಚಿಕಿತ್ಸೆ ನಡೆಸಿದರು. ಲ್ಯೂಕ್ ಮಣಿ ಎನ್ನುವ ವ್ಯಕ್ತಿ 2013 ರಲ್ಲಿ ಬ್ರೇನ್ ಟ್ಯೂಮರ್ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದರು. ಈ ಸಂದರ್ಭದಲ್ಲಿ ಭಾರೀ ಪ್ರಮಾಣದ ಸ್ಟಿರಾಯಿಡ್‌ಗಳನ್ನು ಸೇವಿಸುತ್ತಿದ್ದರು. ಇದರಿಂದಾಗಿ ಅವರ ಮೊಣಕಾಲಿನಿಂದ ನೋವು ಅನುಭವಿಸಿ ಏಳಲಾರದ ಸ್ಥಿತಿ ನಿರ್ಮಾಣವಾಗಿತ್ತು. ನಂತರ ಈ ಆಸ್ಪತ್ರೆಯ ವೈದ್ಯರು ಪರೀಕ್ಷೆ ನಡೆಸಿ ಆತನಿಗೆ ಶಸ್ತ್ರ ಚಿಕಿತ್ಸೆ ನೆರವೇರಿಸಿದರು.